ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 597 (747) |
| ಮಾನ್ಯ ಸದಸ್ಯರ ಹೆಸರು | | ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 18.08.2025 |
| ಪ್ರಶ್ನೆ | | ಉತ್ತರ |
| (ಅ) | ರಾಜ್ಯದಲ್ಲಿರುವ ಸಾರ್ವಜನಿಕ ವಿಶ್ವವಿದ್ಯಾಲಯಗಳ (ವಿವಿ) ಸಂಖ್ಯೆ ಎಷ್ಟು? ಅವು ಯಾವುವು: (ವಿವರ ನೀಡುವುದು) | ರಾಜ್ಯದಲ್ಲಿ ಒಟ್ಟು 32 ಸಾರ್ವಜನಿಕ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ. ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| (ಆ) | ರಾಜ್ಯದಲ್ಲಿ ಹೊಸದಾಗಿ ಸ್ಥಾಪಿಸಲ್ಪಟ್ಟ ವಿವಿಗಳು ಒಳಗೊಂಡಂತೆ ಎಲ್ಲಾ ಸಾರ್ವಜನಿಕ ವಿವಿಗಳ ಸ್ಥಿತಿ, ಶಿಕ್ಷಣದ ಗುಣಮಟ್ಟ, ಸುಧಾರಣೆ ಕುರಿತ ಸಮಗ್ರ ಅಧ್ಯಯನ ನಿಟ್ಟಿನಲ್ಲಿ ರಚಿಸಿದ್ದ ಸಚಿವ ಸಂಪುಟ ಉಪಸಮಿತಿ ಈವರೆವಿಗೂ ಎಷ್ಟು ಸಭೆಗಳನ್ನು ಕರೆದಿದೆ. | ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡುವಂತೆ ಸರ್ಕಾರದಿಂದ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ದಿನಾಂಕ. 13.02.2025 ಮತ್ತು 09.05.2025ರಂದು ಎರಡು ಸಭೆಗಳನ್ನು ನಡೆಸಿರುತ್ತದೆ. |
| (ಇ) | ವಿ ವಿ ಗಳ ಅಧ್ಯಯನ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿವೆ; ಅಥವಾ ಪೂರ್ಣಗೊಂಡಿದೆಯೇ; ವಿವಿಗಳ ಅಧ್ಯಯನ ಪೂರ್ಣಗೊಂಡಿದ್ದಲ್ಲಿ ಸಮಿತಿಯು ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೇ; | ಸಚಿವ ಸಂಪುಟ ಉಪ ಸಮಿತಿಯು ಇಲ್ಲಿಯವರೆಗೆ ಯಾವುದೇ ವರದಿಯನ್ನು ಸಲ್ಲಿಸಿರುವುದಿಲ್ಲ. |
| (ಈ) | ಸಲ್ಲಿಸಿದ್ದಲ್ಲಿ ಸಮಿತಿ ಮಾಡಿರುವ ಪ್ರಮುಖ ಶಿಫಾರಸ್ಸುಗಳೇನು; ವರದಿ ಆಧರಿಸಿ ಸರ್ಕಾರ ತೆಗೆದುಕೊಂಡಿರುವ ತೀರ್ಮಾನಗಳೇನು; (ಸಂಪೂರ್ಣ ವಿವರ ನೀಡುವುದು) | ಉದ್ಭವಿಸುವುದಿಲ್ಲ. |
| (ಉ) | ಇಲ್ಲದಿದ್ದಲ್ಲಿ ಸಮಿತಿ ತನ್ನ ವರದಿಯನ್ನು ಯಾವ ಅವಧಿಯೊಳಗೆ ಸರ್ಕಾರಕ್ಕೆ ಸಲ್ಲಿಸಲು ಉದ್ದೇಶಿಸಿದೆ? (ವಿವರ ನೀಡುವುದು) | ಸಚಿವ ಸಂಪುಟ ಉಪ ಸಮಿತಿಯು ಇಲ್ಲಿಯವರೆಗೆ ಎರಡು ಸಭೆಗಳನ್ನು ನಡೆಸಿದ್ದು, ಶೀಘ್ರದಲ್ಲಿ ವರದಿಯನ್ನು ನಿರೀಕ್ಷಿಸಲಾಗಿದೆ. |

**ಸಂಖ್ಯೆ**: ಇಡಿ 282 ಯುಎನ್ಇ 2025

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು

"ಅನುಬಂಧ"

**<u>ರಾಜ್ಯ ಸಾರ್ವಜನಿಕ ವಿಶ್ವವಿದ್ಯಾಲಯಗಳ ಪಟ್ಟಿ:-</u>**

1. ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
2. ಮೈಸೂರು ವಿಶ್ವವಿದ್ಯಾಲಯ, ಮೈಸೂರು.
3. ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
4. ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ ಜಿಲ್ಲೆ.
5. ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ.
6. ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು.
7. ತುಮಕೂರು ವಿಶ್ವವಿದ್ಯಾಲಯ, ತುಮಕೂರು.
8. ಕನ್ನಡ ವಿಶ್ವವಿದ್ಯಾಲಯ, ಹಂಪಿ.
9. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು.
10. ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ.
11. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
12. ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
13. ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
14. ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
15. ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು.
16. ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
17. ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ.
18. ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು.
19. ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕಾ, ಕೋಲಾರ ಜಿಲ್ಲೆ.
20. ಡಾ.ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ವಿಶ್ವವಿದ್ಯಾಲಯ, ಬೆಂಗಳೂರು.
21. ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ.
22. ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು.
23. ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು.
24. ರಾಯಚೂರು ವಿಶ್ವವಿದ್ಯಾಲಯ, ಯರಗೇರಾ, ರಾಯಚೂರು.
25. ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ.
26. ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ.
27. ಹಾಸನ ವಿಶ್ವವಿದ್ಯಾಲಯ, ಹಾಸನ.
28. ಬೀದರ್ ವಿಶ್ವವಿದ್ಯಾಲಯ, ಬೀದರ್.
29. ಹಾವೇರಿ ವಿಶ್ವವಿದ್ಯಾಲಯ, ಹಾವೇರಿ.
30. ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ.
31. ಕೊಡಗು ವಿಶ್ವವಿದ್ಯಾಲಯ, ಕೊಡಗು.
32. ವಿಶ್ವೇಶ್ವರಯ್ಯ ಕಾಲೇಜ್ ಆಫ್ ಇಂಜಿನಿಯರಿಂಗ್ ಬೆಂಗಳೂರು.